Akashvani: Bangalore
National Bulletin In Kannada
28.05.2026: 13.10hrs
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

28.05.2026: 13.10hrs
********

**ಮುಖ್ಯಾಂಶಗಳು**

೧. ಪೊಲೀಸರು ಹೆಚ್ಚು ಜನಸ್ನೇಹಿ, ಸಂವೇದನಾಶೀಲರಾಗಿರಬೇಕು - ರಾಷ್ಟ್ರಪತಿ ದ್ರೌಪದಿ ಮುರ್ಮು ಸಲಹೆ

೨. ದೇಶದ ಗಡಿಯಿಂದ ೧೫ ಕಿಲೋಮೀಟರ್ ಒಳಗೆ ಅಕ್ರಮ ನಿರ್ಮಾಣಗಳನ್ನು ಕೆಡವಲು ಕೇಂದ್ರ ಗೃಹ ಸಚಿವಾಲಯ ತೀರ್ಮಾನ

೩. ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಂದ ನವದೆಹಲಿಯಲ್ಲಿಂದು ಮುಂಗಾರು ಅಭಿಯಾನ ೨೦೨೬ ರ ರಾಷ್ಟ್ರೀಯ ಕೃಷಿ ಸಮ್ಮೇಳನ ಉದ್ಘಾಟನೆ

೪. ದೇಶಾದ್ಯಂತ ಇಂದು ಬಕ್ರಿದ್ ಹಬ್ಬ ಆಚರಣೆ ; ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಶುಭಾಶಯ

**********

ಗ್ಯಾಂಗ್ಟಾಕ್‌ನ ಪಾಲ್ಜೋರ್ ಕ್ರೀಡಾಂಗಣದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ಸಿಕ್ಕಿಂ ಪೊಲೀಸ್ ಪಡೆಗೆ ಪ್ರತಿಷ್ಠಿತ ರಾಷ್ಟ್ರಪತಿಗಳ ಪ್ರಶಸ್ತಿಯನ್ನು ಪ್ರದಾನ ಮಾಡಿದರು. ಈ ಪ್ರಶಸ್ತಿಯನ್ನು ಪಡೆದ ದೇಶದ ೧೫ನೇ ರಾಜ್ಯ ಮತ್ತು ಈಶಾನ್ಯ ಭಾರತದ ೩ನೇ ರಾಜ್ಯ ಎಂಬ ಹೆಗ್ಗಳಿಕೆಗೆ ಸಿಕ್ಕಿಂ ಪಾತ್ರವಾಗಿದೆ. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿಯವರು, ಪೊಲೀಸ್ ಪಡೆ ಹೆಚ್ಚು ನಾಗರಿಕ ಕೇಂದ್ರೀತವಾಗಿರಬೇಕು. ಜನರೊಂದಿಗೆ, ವಿಶೇಷವಾಗಿ ಮಹಿಳೆಯರು, ಬಡವರು ಮತ್ತು ಮಕ್ಕಳೊಂದಿಗೆ ವ್ಯವಹರಿಸುವಾಗ ಪೊಲೀಸರು ಹೆಚ್ಚು ಸಂವೇದನಾಶೀಲರಾಗಿರಬೇಕು ಎಂದು ಸಲಹೆ ನೀಡಿದರು. ಸೈಬರ್ ಅಪರಾಧ, ಆನ್‌ಲೈನ್ ವಂಚನೆ

ಇತ್ಯಾದಿ ಅಪರಾಧಗಳನ್ನು ಎದುರಿಸಲು ಪೊಲೀಸರು ಸಿದ್ಧರಾಗಿರಬೇಕು. ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವಲ್ಲಿ ಮತ್ತು ಅಪರಾಧಗಳನ್ನು ತಗ್ಗಿಸುವಲ್ಲಿ ಸಿಕ್ಕಿಂ ಪೊಲೀಸರ ಪಾತ್ರ ಶ್ಲಾಘನೀಯ ಎಂದು ಹೇಳಿದ್ದಾರೆ.

**********

ದೇಶದ ಗಡಿಯಿಂದ ೧೫ ಕಿಲೋಮೀಟರ್ ಒಳಗೆ ಅಕ್ರಮ ನಿರ್ಮಾಣಗಳ ಬಗ್ಗೆ ಶೂನ್ಯ ಸಹಿಷ್ಣುತೆ ನೀತಿಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವಂತೆ ಹಾಗೂ ಈ ರೀತಿಯ ಎಲ್ಲಾ ಅಕ್ರಮ ನಿರ್ಮಾಣಗಳನ್ನು ಕೆಡವಲು ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ರಾಜಸ್ಥಾನದ ಬಿಕಾನೇರ್‌ನಲ್ಲಿ ನಡೆದ ಭದ್ರತಾ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಸಚಿವರು, ಭಾರತ-ಪಾಕಿಸ್ತಾನ ಗಡಿಯಲ್ಲಿರುವ ರಾಜಸ್ಥಾನದ ಗಡಿ ಜಿಲ್ಲೆಗಳಿಗೆ ಸಂಬಂಧಪಟ್ಟ ಭದ್ರತಾ ಸಂಬಂಧಿತ ಸಮಸ್ಯೆಗಳನ್ನು ಪರಿಶೀಲಸಿದರು. ಎಲ್ಲಾ ಬ್ಯಾಂಕ್‌ಗಳು ಗಡಿ ಪ್ರದೇಶಗಳಲ್ಲಿ ಬ್ಯಾಂಕಿಂಗ್ ವಹಿವಾಟಿನ ಕಾನೂನು ಮತ್ತು ಆರ್ಥಿಕ ಅನುಸರಣೆಯನ್ನು ಖಚಿತಪಡಿಸಿಕೊಳ್ಳಲು, ದೊಡ್ಡ ವ್ಯಾಪಾರ ಸಂಸ್ಥೆಗಳನ್ನು ಹಾಗೂ ಅವುಗಳ ಹಣಕಾಸಿನ ಮೂಲಗಳನ್ನು ಪರಿಶೀಲಿಸಲು,  ನಕಲಿ ಕಂಪನಿಗಳು ಮತ್ತು ಅವರ ಖಾತೆಗಳನ್ನು ಪತ್ತೆ ಹಚ್ಚಲು, ನಕಲಿ ಆಧಾರ್ ಕಾರ್ಡ್‌ಗಳನ್ನು ಗುರುತಿಸಲು ಮತ್ತು ಗಡಿಯಾಚೆಗಿನ ಕಳ್ಳಸಾಗಾಣೆಯನ್ನು ನಿಯಂತ್ರಿಸಲು ಕೇಂದ್ರ ಗೃಹ ಸಚಿವಾಲಯ, ಜಿಲ್ಲಾಧಿಕಾರಿಗಳಿಗೆ ಜವಾಬ್ದಾರಿಯನ್ನು ವಹಿಸಿದೆ.

**********

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಗುಜರಾತ್‌ಗೆ ಮೂರು ದಿನಗಳ ಭೇಟಿ ಕೈಗೊಳ್ಳಲಿದ್ದಾರೆ. ಪ್ರವಾಸದ ಭಾಗವಾಗಿ, ಅವರು ನಾಳೆ ಗಡಿ ಜಿಲ್ಲೆ ಕಚ್‌ಗೆ ವಿಶೇಷ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ, ಸಚಿವರು ಅಂತಾರಾಷ್ಟ್ರೀಯ ಗಡಿಯಲ್ಲಿರುವ ಅತ್ಯಂತ ಸೂಕ್ಷ್ಮ ಮತ್ತು ಕಾರ್ಯತಂತ್ರದ ಮಹತ್ವದ 'ಹರಾಮಿ ನಾಲಾ' ಪ್ರದೇಶವನ್ನು ಪರಿಶೀಲಿಸಲಿದ್ದಾರೆ. ಗಡಿ ಭದ್ರತಾ ಪಡೆ-ಬಿಎಸ್‌ಎಫ್ ಸ್ಥಾಪಿಸಿರುವ ಭದ್ರತಾ ವ್ಯವಸ್ಥೆಗಳನ್ನು ಪರಿಶೀಲಿಸಲು ಅವರು ಭೌಗೋಳಿಕವಾಗಿ ಸವಾಲಿನ ಮತ್ತು ಜೌಗು ಪ್ರದೇಶಗಳಿಗೆ ಭೇಟಿ ನೀಡಲಿದ್ದಾರೆ. ಪ್ರಸ್ತುತ ಗಡಿ ಪರಿಸ್ಥಿತಿ, ಭದ್ರತಾ ಸನ್ನದ್ಧತೆ, ಸುಧಾರಿತ

ತಂತ್ರಜ್ಞಾನದ ಬಳಕೆ ಮತ್ತು ಭದ್ರತಾ ಸಿಬ್ಬಂದಿಯ ಕಾರ್ಯಾಚರಣೆಯ ಸನ್ನದ್ಧತೆಯನ್ನು ಪರಿಶೀಲಿಸಲು ಸಚಿವ ಅಮಿತ್ ಶಾ ಅವರು ಬಿಎಸ್‌ಎಫ್ ಮತ್ತು ರಕ್ಷಣಾ ಸಂಸ್ಥೆಗಳ ಉನ್ನತ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.

**********

ಭಾರತ ಮತ್ತು ಚೀನಾ, ಗಡಿ ಪ್ರದೇಶಗಳಲ್ಲಿನ ಪರಿಸ್ಥಿತಿಯನ್ನು ಪರಿಶೀಲಿಸಿ, ಶಾಂತಿ ಮತ್ತು ನೆಮ್ಮದಿಯನ್ನು ಕಾಪಾಡುವಲ್ಲಿ ಆಗಿರುವ ಪ್ರಗತಿಯ ಬಗ್ಗೆ ತೃಪ್ತಿ ವ್ಯಕ್ತಪಡಿಸಿವೆ. ಬೀಜಿಂಗ್‌ನಲ್ಲಿ ನಡೆದ ಭಾರತ-ಚೀನಾ ಗಡಿ ವ್ಯವಹಾರಗಳ ಸಮಾಲೋಚನೆ ಮತ್ತು ಸಮನ್ವಯಕ್ಕಾಗಿ ಕಾರ್ಯವಿಧಾನದ ೩೫ನೇ ಸಭೆಯಲ್ಲಿ ಉಭಯ ದೇಶಗಳು ಪರಿಸ್ಥಿತಿಯನ್ನು ಪರಿಶೀಲಿಸಿದವು. ಭಾರತೀಯ ನಿಯೋಗದ ನೇತೃತ್ವವನ್ನು ವಿದೇಶಾಂಗ ಸಚಿವಾಲಯ ಜಂಟಿ ಕಾರ್ಯದರ್ಶಿ ಸುಜೀತ್ ಘೋಷ್ ವಹಿಸಿದ್ದರು. ಚೀನಾದ ನಿಯೋಗದ ನೇತೃತ್ವವನ್ನು ಚೀನಾ ವಿದೇಶಾಂಗ ಸಚಿವಾಲಯದ ಗಡಿ ಮತ್ತು ಸಾಗರ ವ್ಯವಹಾರಗಳ ಇಲಾಖೆಯ ಮಹಾ ನಿರ್ದೇಶಕ ಹೌ ಯಾಂಕಿ ವಹಿಸಿದ್ದರು. ಸಭೆಯಲ್ಲಿ ಗಡಿ ನಿರ್ಣಯ, ಗಡಿ ನಿರ್ವಹಣೆ ಮತ್ತು ಗಡಿಯಾಚೆಗಿನ ಸಹಕಾರಕ್ಕೆ ಸಂಬಂಧಿಸಿದ ವಿಷಯಗಳ ಬಗ್ಗೆ ಎರಡೂ ಕಡೆಯವರು ಚರ್ಚಿಸಿದರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

**********

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ -೨೦೨೪ರ ಸಾಮಾನ್ಯ ವಿಶ್ವವಿದ್ಯಾಲಯ ಪ್ರವೇಶ ಪರೀಕ್ಷೆ-ಯುಜಿ ಪರೀಕ್ಷೆಗಳಿಗೆ ಪರಿಷ್ಕೃತ ಪರೀಕ್ಷಾ ದಿನಾಂಕಗಳು ಮತ್ತು ಪ್ರವೇಶ ಪತ್ರಗಳನ್ನು ಬಿಡುಗಡೆ ಮಾಡಿದೆ. ಪರೀಕ್ಷೆಗಳು ಈ ತಿಂಗಳ ೩೧ ಮತ್ತು ಮುಂದಿನ ತಿಂಗಳ ೪ ಮತ್ತು ೭ ರಂದು ನಡೆಸಲಾಗುವುದು. ಇಂದು ನಿಗದಿಯಾಗಿದ್ದ ಪರೀಕ್ಷೆಯನ್ನು ಬಕ್ರಿದ್ ಹಬ್ಬದ ಕಾರಣ ಮರು ನಿಗದಿಪಡಿಸಲಾಗಿದೆ. ಭಾನುವಾರ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಬಿಡುಗಡೆ ಮಾಡಲಾಗಿದೆ. ಅವುಗಳನ್ನು ಎನ್‌ಟಿಎ ಅಧಿಕೃತ ಜಾಲತಾಣದಿಂದ ಡೌನ್‌ಲೋಡ್ ಮಾಡಬಹುದು. ಮುಂದಿನ ತಿಂಗಳ ೪ ಮತ್ತು ೭ ರಂದು ಪರೀಕ್ಷೆ ನಡೆಯಲಿರುವ ಉಳಿದ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು ಎಂದು ಎನ್‌ಟಿಎ ತಿಳಿಸಿದೆ.

**********

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ನವದೆಹಲಿಯಲ್ಲಿ ಇಂದು ಮುಂಗಾರು ಅಭಿಯಾನ ೨೦೨೬ ರ ರಾಷ್ಟ್ರೀಯ ಕೃಷಿ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಎರಡು ದಿನಗಳ ಕಾರ್ಯಕ್ರಮದಲ್ಲಿ ವಿಷಯಾಧಾರಿತ ಚರ್ಚೆಗಳು, ರಾಜ್ಯವಾರು ಭಾಗವಹಿಸುವಿಕೆ, ಗುಂಪು ಚರ್ಚೆಗಳು ಹಾಗೂ ಕೃಷಿ ಮತ್ತು ಸಂಬಂಧಿತ ವಲಯಗಳಿಗೆ ಸಂಬಂಧಿಸಿದ ನಿರ್ಣಾಯಕ ವಿಷಯಗಳ ಕುರಿತು ಪ್ರಸ್ತುತಿಗಳು ನಡೆಯಲಿವೆ. ಸುಸ್ಥಿರ ಕೃಷಿ, ವರ್ಧಿತ ಉತ್ಪಾದಕತೆ, ಹವಾಮಾನ ಸ್ಥಿತಿಸ್ಥಾಪಕತ್ವ, ಮೂಲಸೌಕರ್ಯ ಬಲವರ್ಧನೆ ಮತ್ತು ರೈತರ ಸಮೃದ್ಧಿಯ ಮೇಲೆ ಕೇಂದ್ರೀಕರಿಸಿ ಮುಂಬರುವ ಮುಂಗಾರು ಋತುವಿನ ಕಾರ್ಯತಂತ್ರಗಳನ್ನು ಚರ್ಚಿಸುವ ಗುರಿಯನ್ನು ಈ ಸಮ್ಮೇಳನ ಹೊಂದಿದೆ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ತಿಳಿಸಿದೆ.

**********

ಸಿಬಿಎಸ್‌ಸಿ ೧೨ನೇ ತರಗತಿಯ ಪರೀಕ್ಷಾ ಮೌಲ್ಯಮಾಪನ ಪ್ರಕ್ರಿಯೆಗೆ ಸಂಬಂಧಿಸಿದಂತೆ ಕೆಲವು ಸಮಸ್ಯೆಗಳು ಬೆಳಕಿಗೆ ಬಂದ ನಂತರ ಮರುಮೌಲ್ಯಮಾಪನ ಪ್ರಕ್ರಿಯೆ ಆರಂಭವಾಗಲಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ಸಿಬಿಎಸ್‌ಸಿ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಆನ್-ಸ್ಕ್ರೀನ್ ಮಾರ್ಕಿಂಗ್ ಒಎಸ್‌ಎಂ ಒಂದು ಪ್ರಗತಿಪರ ಸಾಧನವಾಗಿದ್ದು, ಭಾರತದ ಅನೇಕ ವಿಶ್ವವಿದ್ಯಾಲಯಗಳು ಮತ್ತು ಸಂಸ್ಥೆಗಳು ಹಾಗೂ ಪ್ರಪಂಚಾದ್ಯಂತ ಹಲವಾರು ಸಂಸ್ಥೆಗಳು ಈ ವ್ಯವಸ್ಥೆಯತ್ತ ಸಾಗುತ್ತಿವೆ. ದೇಶದಲ್ಲಿ ಸಿಬಿಎಸ್‌ಸಿ ಈ ವ್ಯವಸ್ಥೆಯನ್ನು ಜಾರಿಗೆ ತಂದಿರುವುದು ಇದೇ ಮೊದಲು. ಸುಮಾರು ೪೦ ಕೋಟಿ ಸ್ಕ್ಯಾನ್ ಮಾಡಿದ ಪುಟಗಳನ್ನು ಸಿಬಿಎಸ್‌ಸಿ ಮೊದಲ ಬಾರಿಗೆ ಒಎಸ್‌ಎಂ ಪ್ರಕ್ರಿಯೆಯ ಮೂಲಕ ಮೌಲ್ಯಮಾಪನ ಮಾಡಿದೆ ಎಂದು ಸಚಿವ ಧರ್ಮೇಂದ್ರ ಪ್ರಧಾನ್ ಮಾಹಿತಿ ನೀಡಿದ್ದಾರೆ.

**********

ತ್ಯಾಗ ಮತ್ತು ಬಲಿದಾನದ ಸಂಕೇತವಾಗಿರುವ ಈದ್-ಉಜ್-ಜುಹಾ - ಬಕ್ರಿದ್ ಹಬ್ಬವನ್ನು ದೇಶಾದ್ಯಂತ ಆಚರಿಸಲಾಗುತ್ತಿದೆ. ಈ ಪವಿತ್ರ ಸಂದರ್ಭವು ಪ್ರವಾದಿ ಇಬ್ರಾಹಿಂ ಅವರ ಸಂಪೂರ್ಣ ನಂಬಿಕೆಯನ್ನು ಗೌರವಿಸುತ್ತದೆ ಮತ್ತು ಕುರ್ಬಾನಿ ಆಚರಣೆಯಿಂದ ಗುರುತಿಸಲ್ಪಟ್ಟಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಈದ್ ಉಲ್-ಅದ್ಹಾ ಹಬ್ಬದ ಸಂದರ್ಭದಲ್ಲಿ ಜನರಿಗೆ ಶುಭ ಕೋರಿದ್ದಾರೆ. ಈ ಹಬ್ಬವು ಭಕ್ತಿ, ತ್ಯಾಗ ಮತ್ತು ನಿಸ್ವಾರ್ಥತೆಯನ್ನು ಸಂಕೇತಿಸುತ್ತದೆ ಎಂದು ರಾಷ್ಟ್ರಪತಿಗಳು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

**********

ಇಂದು ಸ್ವಾತಂತ್ರ ವೀರ ವಿನಾಯಕ ದಾಮೋದರ್ ಸಾವರ್ಕರ್ ಅವರ ಜನ್ಮ ವಾರ್ಷಿಕೋತ್ಸವ ಈ ಹಿನ್ನೆಲೆಯಲ್ಲಿ ಅವರನ್ನು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಅನೇಕ ಗಣ್ಯರು ಸ್ಮರಿಸಿದ್ದಾರೆ.ವೀರ ಸಾವರ್ಕರ್ ಅವರ ಧೈರ್ಯ ಮತ್ತು ದೇಶಭಕ್ತಿ ಯಾವಗಾಲೂ ಜನರಿಗೆ ಸ್ಫೂರ್ತಿ ನೀಡುತ್ತದೆ. ವೀರ ಸಾವರ್ಕರ್ ಅವರ ಬುದ್ಧಿಶಕ್ತಿ ಮತ್ತು ಸಾಮಾಜಿಕ ಸುಧಾರಣೆಗೆ ಅವರ ಶ್ರಮ ಗಮನಾರ್ಹವಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸ್ವಾತಂತ್ರ್ಯ ಹೋರಾಟದ ನಿರ್ಭೀತ ಯೋಧ ವೀರ ಸಾವರ್ಕರ್ ಅವರು ತಮ್ಮ ಇಡೀ ಜೀವನವನ್ನು ಮಾತೃಭೂಮಿಯ ಸೇವೆಗೆ ಮೂಡಿಪಾಗಿಟ್ಟರು. ಅವರ ಜೀವನ ಮತ್ತು ಬರಹಗಳಿಂದ ರಾಷ್ಟ್ರ ಮತ್ತು ಸಿದ್ಧಾಂತದ ಮೇಲಿನ ಅಚಲ ಭಕ್ತಿಯ ನಿಜವಾದ ಅರ್ಥವನ್ನು ನಾವು ಕಲಿಯಬಹುದು ಎಂದು ಸಾಮಾಜಿಕ ಜಾಲತಾಣದಲ್ಲಿ ಕೇಂದ್ರ ಸಚಿವ ಅಮಿತ್ ಶಾ ಹೇಳಿದ್ದಾರೆ. ವೀರ ಸಾವರ್ಕರ್ ಅವರು ಅಸ್ಪೃಶ್ಯತೆ ಯಂತಹ ಸಾಮಾಜಿಕ ಅನಿಷ್ಠಗಳನ್ನು ತೀವ್ರವಾಗಿ ವಿರೋಧಿಸಿದರು ಮತ್ತು ದೇಶದ ಜನರನ್ನು ಒಗ್ಗೂಡಿಸಿದರು. ಅವರ ಜೀವನವು ಮುಂದಿನ ಪೀಳಿಗೆಗೆ ಸದಾ ಮಾರ್ಗದರ್ಶನ ನೀಡುತ್ತದೆ ಎಂದು ಅವರು ತಿಳಿಸಿದರು.

**********

ಸ್ವಚ್ಛ ಭಾರತ ಮಿಷನ್ ೨.೦ ಪರಿಣಾಮಕಾರಿ ಅನುಷ್ಠಾನದ ಅಗತ್ಯವನ್ನು ಪ್ರಧಾನಿ ನರೇಂದ್ರ ಮೋದಿ ಒತ್ತಿ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ೫೧ ನೇ ಪ್ರಗತಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಸ್ವಚ್ಛ ಭಾರತ ಮಿಷನ್ ೨.೦ ಮಿಷನ್ ಮೂಲಸೌಕರ್ಯ ಸೃಷ್ಟಿಯನ್ನು ಮೀರಿ ಸಾಗಬೇಕು ಮತ್ತು ನಿಯಮಿತ ಮೇಲ್ವಿಚಾರಣೆ, ನಾಗರಿಕರ ಭಾಗವಹಿಸುವಿಕೆ ಹಾಗೂ ವಿವಿಧ ಪಾಲುದಾರರ ನಡುವಿನ ಸಮನ್ವಯದ ಮೂಲಕ ಉತ್ತಮ ಫಲಿತಾಂಶಗಳನ್ನು ಖಚಿತಪಡಿಸಿಕೊಳ್ಳಬೇಕು ಎಂದು ಸೂಚಿಸಿದ್ದಾರೆ. ತ್ಯಾಜ್ಯ ಸಂಸ್ಕರಣಾ ಘಟಕಗಳು ಮತ್ತು ಗೋವರ್ಧನ್ ಸ್ಥಾವರಗಳು ಸೇರಿದಂತೆ ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದ ಮೂಲಸೌಕರ್ಯಗಳನ್ನು ಪೂರ್ಣಗೊಳಿಸುವುದನ್ನು ತ್ವರಿತಗೊಳಿಸುವಂತೆ ರಾಜ್ಯಗಳಿಗೆ ಮನವಿ ಮಾಡಿದರು. ಸಭೆಯಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಒಂಬತ್ತು ರಾಜ್ಯಗಳನ್ನು ಒಳಗೊಂಡಂತೆ ರೈಲ್ವೆ, ವಿದ್ಯುತ್ ಮತ್ತು ರಸ್ತೆ ವಲಯಗಳಲ್ಲಿ ಸುಮಾರು ೩೦ ಸಾವಿರ ಕೋಟಿ ರೂಪಾಯಿಗಳ ಮೌಲ್ಯದ ಏಳು ನಿರ್ಣಾಯಕ ಮೂಲಸೌಕರ್ಯ ಯೋಜನೆಗಳನ್ನು ಪರಿಶೀಲಿಸಿದರು.

**********

ಫೈನಲ್‌ನಲ್ಲಿ ಸ್ಥಾನ ಪಡೆಯಲು ನ್ಯೂ ಚಂಡೀಗಢದ ಮಹಾರಾಜ ಯದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಾಳೆ ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್‌ನ ೨ನೇ ಕ್ವಾಲಿಫೈಯರ್  ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡವು ಗುಜರಾತ್ ಟೈಟನ್ಸ್ ತಂಡವನ್ನು ಎದುರಿಸಲಿದೆ. ಭಾನುವಾರ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಫೈನಲ್ ಪಂದ್ಯ ನಡೆಯಲಿದೆ. ನ್ಯೂ ಚಂಡೀಗಢದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್‌ನ ಎರಡನೇ ಕ್ವಾಲಿಫೈಯರ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ರಾಜಸ್ಥಾನ ರಾಯಲ್ಸ್ ೪೭ ರನ್‌ಗಳಿಂದ ಭರ್ಜರಿ ಜಯ ಗಳಿಸಿತು.

****END*****